**File No.DTE-CDC0LRDC/4/2020-JD CDC-DEPT TECH EDUCATION**

1069

ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಆಯುಕ್ತರ ಕಛೇರಿ
ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ
ಬೆಂಗಳೂರು-560001, ದಿ:15-03-2021

-: ಸುತ್ತೋಲೆ :-

ವಿಷಯ: 2020-21 ನೇ ಸಾಲಿನ "44ನೇ ರಾಜ್ಯ ಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟ" ವನ್ನು ಮತ್ತು ರಾಜ್ಯ ಮಟ್ಟದ "ನೀವೇ ಮಾಡಿ ನೋಡಿ" ತಾಂತ್ರಿಕ ವಸ್ತು ಪ್ರದರ್ಶನವನ್ನು ರದ್ದು ಪಡಿಸುವ ಬಗ್ಗೆ.

*****

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನಕ್ಕೆ ಒಳಪಡುವ ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ / ಖಾಸಗಿ ಪಾಲಿಟೆಕ್ನಿಕ್ ಗಳಲ್ಲಿ ನಿರ್ದೇಶನಾಲಯದ ಸಹಯೋಗದೊಂದಿಗೆ ರಾಜ್ಯ ಮಟ್ಟದ "ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟ" ವನ್ನು ಮತ್ತು "ನೀವೇ ಮಾಡಿ ನೋಡಿ" ತಾಂತ್ರಿಕ ವಸ್ತು ಪ್ರದರ್ಶನವನ್ನು ಆಯೋಜಿಸಲಾಗುತ್ತಿತ್ತು.

ಈಗಾಗಲೇ 2020-21ನೇ ಸಾಲಿನ ಶೈಕ್ಷಣಿಕ ತರಗತಿಗಳು ಪ್ರಾರಂಭವಾಗಿದ್ದು, ಆರ್ಥಿಕ ಹಾಗೂ ಶೈಕ್ಷಣಿಕ ವರ್ಷವು ಮಾರ್ಚ್ 31 ರಂದು ಅಂತ್ಯಗೊಳ್ಳುತ್ತಿದ್ದು, ಕೋವಿಡ್-19ರ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ವ್ಯಾಸಂಗದ ಹಿತದೃಷ್ಠಿಯಿಂದ, ಹಾಗೂ 2020-21 ನೇ ಸಾಲಿನ "44ನೇ ರಾಜ್ಯ ಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟ" ವನ್ನು ಮತ್ತು ರಾಜ್ಯ ಮಟ್ಟದ "ನೀವೇ ಮಾಡಿ ನೋಡಿ" ತಾಂತ್ರಿಕ ವಸ್ತು ಪ್ರದರ್ಶನವನ್ನು ಆಯೋಜಿಸಲು ಯಾವುದೇ ರೀತಿಯ ಪೂರ್ವಸಿದ್ಧತೆಗಳನ್ನು ಮಾಡಿಕೊಳ್ಳಲು ಸಾಧ್ಯವಾಗದ ಪ್ರಯುಕ್ತ, 2020-21 ನೇ ಸಾಲಿನ "44ನೇ ರಾಜ್ಯ ಮಟ್ಟದ ಅಂತರ ಪಾಲಿಟೆಕ್ನಿಕ್ ಕ್ರೀಡಾಕೂಟ" ವನ್ನು ಮತ್ತು ರಾಜ್ಯ ಮಟ್ಟದ "ನೀವೇ ಮಾಡಿ ನೋಡಿ" ತಾಂತ್ರಿಕ ವಸ್ತು ಪ್ರದರ್ಶನವನ್ನು ರದ್ದು ಪಡಿಸಲಾಗಿದೆ ಎಂಬ ಮಾಹಿತಿಯನ್ನು ವಿದ್ಯಾರ್ಥಿಗಳ ಗಮನಕ್ಕೆ ತರಲು ಎಲ್ಲಾ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸಲಾಗಿದೆ.

ಜಂಟಿ ನಿರ್ದೇಶಕರು(ಸಿಡಿಸಿ)

ಇವರಿಗೆ:- ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ / ಖಾಸಗಿ ಪಾಲಿಟೆಕ್ನಿಕ್ ಗಳ ಪ್ರಾಚಾರ್ಯರುಗಳಿಗೆ ಮಾಹಿತಿಗಾಗಿ ಹಾಗೂ ಮುಂದಿನ ಸೂಕ್ತ ಕ್ರಮಕ್ಕಾಗಿ.

ಪ್ರತಿ:- ಇ-ಆಡಳಿತ ವಿಭಾಗ, ತಾಂ.ಶಿ.ನಿ, ಬೆಂಗಳೂರು ಇವರಿಗೆ ಡಿ.ಟಿ.ಇ ವೆಬ್ ಸೈಟ್ ನಲ್ಲಿ ಪ್ರಕಟಿಸಲು ಸೂಚಿಸಲಾಗಿದೆ.